ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ಯ.ವ/ತಾಂ.ಮಂ/83 /2014–15.

ಮುಖ್ಯ ಅಭಿಯಂತರರ ಕಛೇರಿ
ಯಲಹಂಕ ವಲಯ, ಬೃಬೆಂ.ಮ.ಪಾ.
ಬೆಂಗಳೂರು –92 ದಿನಾಂಕ:
ದಿನಾಂಕ: 17.12.14

ತಾಂತ್ರಿಕ ಮಂಜೂರಾತಿ

ವಿಷಯ:– **Extension of Reva College Road to 25 Mts to Hosahalli (to link International Airport)**

ಉಲ್ಲೇಖ(1)ಮುಖ್ಯ ಲೆಕ್ಕಾಧಿಕಾರಿರವರ ಕಛೇರಿ ಕಾಮಗಾರಿ ಸಂಕೇತ: 005–13–000089

(2) ಆಡಳಿತಾತ್ಮಕ ಅನುಮೋದನೆ ಸಂಖ್ಯೆ: 1058 : ದಿನಾಂಕ: 16.12.14

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಯೋಜನೆ ವಿಭಾಗ) ರವರು 2014–15ನೇ ಸಾಲಿನ ದರಪಟ್ಟಿಯಂತೆ **"ಪಿ–2908"** ಅನುದಾನದಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ.100.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ: ಬಿ12(1)ಪಿಆರ್/394/2011–12 ದಿನಾಂಕ:02–09–2014ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಈ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 24-25 ಕ್ರ.ಸಂ 83 ರಲ್ಲಿ ದಾಖಲಿಸಲಾಗಿದೆ.

ಷರತ್ತುಗಳು:–

1) ಅಂದಾಜು ಪಟ್ಟಿಯ ಮೊತ್ತ ರೂ.100.00 ಲಕ್ಷಗಳಿಗೆ ಮೀರದಂತೆ ಕಾಮಗಾರಿಯನ್ನು ಕೈಗೊಳ್ಳುವುದು.
2) ರಸ್ತೆ ಇತಿಹಾಸ ಪುಸ್ತಕದಲ್ಲಿ (Road History Book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮ ಬದ್ಧಗೊಳಿಸುವುದು.
3) ಕೆಲಸದ ಸ್ಥಳದಿಂದ ಸಾಗಣಿ ದೂರಕ್ಕೆ ಅನುಮೋದನೆ ಪಡೆಯುವುದು.
4) ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.

ಮುಖ್ಯ ಅಭಿಯಂತರರು,
ಯಲಹಂಕ ವಲಯ,
ಬಿ.ಬಿ.ಎಂ.ಪಿ ಬೆಂಗಳೂರು–92.

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು, ಯಲಹಂಕ ವಲಯ, ಯೋಜನಾ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ವಲಯ, ಯೋಜನೆ ಉಪ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ನಿಯಂತ್ರಕರು(ಹಣಕಾಸು) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.

ಮುಖ್ಯ ಲೆಕ್ಕಾಧಿಕಾರಿಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ ಕಳುಹಿಸಿದೆ